ಉದಯವಾಣಿ

8-3-2023

▸ ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ

# ಕೊಲೊರೆಕ್ಟಲ್ ಕ್ಯಾನ್ಸರ್ ಜಾಗೃತಿ, ಮಾಹಿತಿ

**ಮಣಿಪಾಲ, ಮಾ. 7:** ಮಾರ್ಚ್ ತಿಂಗಳನ್ನು ಕೊಲೊರೆಕ್ಟಲ್ ಕ್ಯಾನ್ಸರ್ (ದೊಡ್ಡ ಕರುಳು ಮತ್ತು ಗುದನಾಳ ಸಂಬಂಧಿತ) ಜಾಗೃತಿ ಮಾಸವನ್ನಾಗಿ ರಾಷ್ಟ್ರಮಟ್ಟದಲ್ಲಿ ಆಚರಿಸಲಾಗುತ್ತದೆ. ಈ ಪ್ರಯುಕ್ತ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಕೊಲೊರೆಕ್ಟಲ್ ಕ್ಯಾನ್ಸರ್ ಜಾಗೃತಿ ಮಾತು ಮತ್ತು ಮಾಹಿತಿ ಕೈಪಿಡಿ, ವಿಶೇಷ ರಿಯಾಯಿತಿ ದರದ ಪ್ಯಾಕೇಜ್‌ಗಳನ್ನು ಸೋಮವಾರ ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ। ಆನಂದ್ ವೇಣುಗೋಪಾಲ್ ಬಿಡುಗಡೆಗೊಳಿಸಿದರು.




ಗ್ಯಾಸ್ಟ್ರೋ ಎಂಟೆರೊಲೊಜಿ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರು, ಉಪವೈದ್ಯಕೀಯ ಅಧೀಕ್ಷಕ ಡಾ। ಶಿರನ್ ಶೆಟ್ಟಿ ಮಾತನಾಡಿ, ಕೊಲೊರೆಕ್ಟಲ್ ಕ್ಯಾನ್ಸರ್ ಅನ್ನು ತಡೆಗಟ್ಟಬಹುದು. ಕೊಲೊನೋಸ್ಕೋಪಿಯನ್ನು ಪತ್ತೆ ಹಚ್ಚಲು ಇರುವ ಸೂಕ್ತ ಪರೀಕ್ಷಾ ವಿಧಾನವಾಗಿದೆ. ಆದ್ದರಿಂದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಮಾರ್ಚ್ ತಿಂಗಳ 31ರ ವರೆಗೆ ವಿಶೇಷ ರಿಯಾಯಿತಿಯಾಗಿ 4,999 ರೂ. ದರದಲ್ಲಿ ಕೊಲೊನೋಸ್ಕೋಪಿ ಮತ್ತು ಆವಶ್ಯಕ ರಕ್ತ ಪರೀಕ್ಷೆಯನ್ನು ನಡೆಸಲಾಗುತ್ತದೆ. ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬಹುದು ಎಂದರು.

ವೈದ್ಯಕೀಯ ಅಧೀಕ್ಷಕ ಡಾ। ಅವಿನಾಶ್ ಶೆಟ್ಟಿ, ಕಾರ್ಕಳ ಡಾ। ಟಿಎಂಎ ಪೈ ಆಸ್ಪತ್ರೆಯ ವೈದ್ಯಾಧಿಕಾರಿ ಡಾ। ಕೀರ್ತಿನಾಥ ಬಲ್ಲಾಳ್, ಮಾರ್ಕೆಟಿಂಗ್ ಮುಖ್ಯಸ್ಥ ಸಚಿನ್ ಕಾರಂತ್ ಉಪಸ್ಥಿತರಿದ್ದರು.

ಪ್ರಜಾವಾಣಿ
ಮಂಗಳವಾರ • ಮಾರ್ಚ್ 7, 2023

# ಕೆಎಂಸಿ: ಕೊಲೊರೆಕ್ಟಲ್ ಕ್ಯಾನ್ಸರ್ ಜಾಗೃತಿ

ಪ್ರಜಾವಾಣಿ ವಾರ್ತೆ

ಉಡುಪಿ: ಕೊಲೊರೆಕ್ಟಲ್ ಕ್ಯಾನ್ಸರ್ (ದೊಡ್ಡ ಕರುಳು ಮತ್ತು ಗುದನಾಳ ಸಂಬಂಧಿತ) ಜಾಗೃತಿ ಮಾಸಾಚರಣೆ ಅಂಗವಾಗಿ ಮಣಿಪಾಲದ ಕಸ್ತೂರಬಾ ಆಸ್ಪತ್ರೆಯಲ್ಲಿ ಸೋಮವಾರ ಕೊಲೊರೆಕ್ಟಲ್ ಕ್ಯಾನ್ಸರ್ ಜಾಗೃತಿ ಮಾಹಿತಿ ಕೈಪಿಡಿ ಬಿಡುಗಡೆ ಹಾಗೂ ವಿಶೇಷ ರಿಯಾಯಿತಿ ದರದ ಪ್ಯಾಕೇಜ್ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಗ್ಯಾಸ್ಟ್ರೋ ಎಂಟರೊಲೊಜಿ ವಿಭಾಗದ ಮುಖ್ಯಸ್ಥ ಹಾಗೂ ಉಪ ವೈದ್ಯಕೀಯ ಅಧೀಕ್ಷಕರಾದ ಡಾ.ಶಿರನ್ ಶೆಟ್ಟಿ ಮಾತನಾಡಿ, 'ಕೊಲೊರೆಕ್ಟಲ್ ಕ್ಯಾನ್ಸರ್ ಕೋಲನ್ ಅಥವಾ ಗುದನಾಳದಲ್ಲಿ ಕಾಣಿಸಿಕೊಳ್ಳುತ್ತದೆ. ಜೀವಕೋಶಗಳು ಅಸಹಜವಾಗಿ ಮತ್ತು ನಿಯಂತ್ರಣವಿಲ್ಲದೆ ವಿಭಜಿಸಿ ಗಡ್ಡೆಯಾಗಿ ಬದಲಾಗಿ ಕೊಲೊರೆಕ್ಟರ್ ಕ್ಯಾನ್ಸರ್ ಬರುತ್ತದೆ.




ಕೊಲೊರೆಕ್ಟಲ್ ಕ್ಯಾನ್ಸರ್ ಜಾಗೃತಿ ಮಾಹಿತಿ ಕೈಪಿಡಿ ಬಿಡುಗಡೆ ಹಾಗೂ ವಿಶೇಷ ರಿಯಾಯಿತಿ ದರದ ಪ್ಯಾಕೇಜ್ ಮಣಿಪಾಲದ ಕಸ್ತೂರಬಾ ಆಸ್ಪತ್ರೆಯಲ್ಲಿ ಬಿಡುಗಡೆ ಮಾಡಲಾಯಿತು

ಭಾರತದಲ್ಲಿ ಮಹಿಳೆಯರಿಗೆ ಹೋಲಿಸಿದರೆ ಪುರುಷರಲ್ಲಿ ಕರುಳಿನ ಕ್ಯಾನ್ಸರ್ ಮತ್ತು ಗುದನಾಳದ ಕ್ಯಾನ್ಸರ್ ಹೆಚ್ಚಾಗಿ ಕಾಣಿಸಿಕೊಳ್ಳುತ್ತದೆ. ಕೊಲೊರೆಕ್ಟಲ್ ಕ್ಯಾನ್ಸರ್ ಮಾರಣಾಂತಿಕವಾಗಿದ್ದು, ಮಾರಕ ಕ್ಯಾನ್ಸರ್‌ಗಳಲ್ಲಿ ಎರಡನೇ ಸ್ಥಾನದಲ್ಲಿದೆ ಎಂದರು.

ಕೊಲೊರೆಕ್ಟಲ್ ಕ್ಯಾನ್ಸರ್ ಕೊಲೊನೋಸ್ಕೋಪಿ ಮೂಲಕ ಪತ್ತೆ ಹಚ್ಚಬಹುದು. ಮಣಿಪಾಲದ ಕಸ್ತೂರಬಾ ಆಸ್ಪತ್ರೆಯಲ್ಲಿ ಮಾರ್ಚ್ 31ರವರೆಗೆ ವಿಶೇಷ ರಿಯಾಯಿತಿ ದರದಲ್ಲಿ ₹ 4,999 ಕೊಲೊನೋಸ್ಕೋಪಿ ಪರೀಕ್ಷೆ ಮಾಡಲಾಗುವುದು. ಇದರ ಜತೆಗೆ ರಕ್ತ ಪರೀಕ್ಷೆಯನ್ನು ನಡೆಸಲಾಗುವುದು. ಸಾರ್ವಜನಿಕರು ಇದರ ಸದುಪಯೋಗಪಡೆದುಕೊಳ್ಳಬಹುದು ಎಂದರು.

ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಕ್ಯಾನ್ಸರ್ ಜಾಗೃತಿ ಮಾಹಿತಿ ಕೈಪಿಡಿ ಬಿಡುಗಡೆ ಮಾಡಿದರು. ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ ಶೆಟ್ಟಿ, ಕಾರ್ಕಳ ಡಾ.ಟಿಎಂಎ ಪೈ ಆಸ್ಪತ್ರೆ ವೈದ್ಯಾಧಿಕಾರಿ ಡಾ.ಕೀರ್ತಿನಾಥ ಬಲ್ಲಾಳ, ಮಾರ್ಕೆಟಿಂಗ್ ಮುಖ್ಯಸ್ಥ ಸಚಿನ್ ಕಾರಂತ್ ಕಾರ್ಯಕ್ರಮದಲ್ಲಿ ಇದ್ದರು.

ROOT'S INSTITUTE Aut

ಕರಾವಳಿ

# ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ಕೊಲೊರೆಕ್ಟಲ್ ಕ್ಯಾನ್ಸರ್ ಜಾಗೃತಿ ಮಾತು ಮತ್ತು ಮಾಹಿತಿ ಕೈಪಿಡಿ ಬಿಡುಗಡೆ - ರಿಯಾಯಿತಿ ದರದಲ್ಲಿ ವಿಶೇಷ ಪ್ಯಾಕೇಜ್

1 week ago




ಮಣಿಪಾಲ, 6ನೇ ಮಾರ್ಚ್ 2023: ಮಾರ್ಚ್ ತಿಂಗಳನ್ನು ಕೊಲೊರೆಕ್ಟಲ್ ಕ್ಯಾನ್ಸರ್ (ದೊಡ್ಡ ಕರುಳು ಮತ್ತು ಗುದನಾಳ ಸಂಬಂಧಿತ ) ಜಾಗೃತಿ ಮಾಸವನ್ನಾಗಿ ರಾಷ್ಟ್ರೀಯವಾಗಿ ಆಚರಿಸಲಾಗುತ್ತದೆ. ಈ ಪ್ರಯುಕ್ತ ಇಂದು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ಕೊಲೊರೆಕ್ಟಲ್ ಕ್ಯಾನ್ಸರ್ ಜಾಗೃತಿ ಜಾಗೃತಿ ಮಾತು ಮತ್ತು ಮಾಹಿತಿ ಕೈ ಪಿಡಿ ಹಾಗೂ ವಿಶೇಷ ರಿಯಾಯಿತಿ ದರದ ಪ್ಯಾಕೇಜ್ ಬಿಡುಗಡೆ ಮಾಡಲಾಯಿತು. ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಗ್ಯಾಸ್ಟ್ರೋ ಎಂಟೆರೊಲೊಜಿ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರು ಹಾಗೂ ಉಪವೈದ್ಯಕೀಯ ಅಧೀಕ್ಷಕರಾದ ಡಾ ಶಿರನ್ ಶೆಟ್ಟಿ ಅವರು " ಕೊಲೊರೆಕ್ಟಲ್ ಕ್ಯಾನ್ಸರ್, ಕೋಲನ್ (ದೊಡ್ಡ ಕರುಳು) ಅಥವಾ ಗುದನಾಳದಲ್ಲಿ ಸಂಭವಿಸುತ್ತದೆ, ಜೀವಕೋಶಗಳು ಅಸಹಜವಾದಾಗ ಮತ್ತು ನಿಯಂತ್ರಣವಿಲ್ಲದೆ ವಿಭಜಿಸಿ, ಗೆಡ್ಡೆ ಎಂದು ಕರೆಯಲ್ಪಡುವ ದ್ರವ್ಯರಾಶಿಯನ್ನು ರೂಪಿಸುತ್ತವೆ. ಭಾರತದಲ್ಲಿ, ಮಹಿಳೆಯರಿಗೆ ಹೋಲಿಸಿದರೆ ಪುರುಷರಲ್ಲಿ ಕರುಳಿನ ಕ್ಯಾನ್ಸರ್ ಮತ್ತು ಗುದನಾಳದ ಕ್ಯಾನ್ಸರ್ ನ ಪ್ರಮಾಣವು ಹೆಚ್ಚಾಗಿರುತ್ತದೆ.ಕೊಲೊರೆಕ್ಟಲ್ ಕ್ಯಾನ್ಸರ್ ಮರಣಕ್ಕೆ ಕಾರಣವಾಗಿರುವ ಕ್ಯಾನ್ಸರ್ ಗಳಲ್ಲಿ ಎರಡನೇ ಸ್ಥಾನದಲ್ಲಿದೆ, ಕೊಲೊರೆಕ್ಟಲ್ ಕ್ಯಾನ್ಸರ್ ಅನ್ನು ತಡೆಗಟ್ಟಬಹುದು, ಕೊಲೊನೋಸ್ಕೋಪಿ ಇದನ್ನು ಪತ್ತೆ ಹಚ್ಚಲು ಇರುವ ಸೂಕ್ತ ಪರೀಕ್ಷಾ ವಿಧಾನವಾಯಿದೆ. ಆದ್ದರಿಂದ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ಈ ತಿಂಗಳ 31ದಿನಾಂಕದವರೆಗೆ ವಿಶೇಷ ರಿಯಾಯಿತಿಯಾಗಿ 4999 ರೂಪಾಯಿ ದರದಲ್ಲಿ ಕೊಲೊನೋಸ್ಕೋಪಿ ಮತ್ತು ಅವಶ್ಯಕ ರಕ್ತ ಪರೀಕ್ಷೆಯನ್ನು ನಡೆಸಲಾಗುತ್ತದೆ. ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು" ಎಂದು ಹೇಳಿದರು.

ವೈದ್ಯಕೀಯ ಅಧೀಕ್ಷಕರಾದ ಡಾ ಅವಿನಾಶ ಶೆಟ್ಟಿ, ಕಾರ್ಕಳ ಡಾ ಟಿ ಎಂ ಪೈ ಆಸ್ಪತ್ರೆ ವೈದ್ಯಾಧಿಕಾರಿ ಡಾ ಕೀರ್ತಿನಾಥ ಬಲ್ಲಾಳ, ಮಾರ್ಕೆಟಿಂಗ್ ಮುಖ್ಯಸ್ಥ ಸಚಿನ್ ಕಾರಂತ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

*ವೈದ್ಯಕೀಯ ಅಧೀಕ್ಷಕರು*

KARAVALI XPRESS
ವಿಶ್ವಾಸದ ನಡೆ
Wednesday, March 15, 2023

# ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ಕೊಲೊರೆಕ್ಟಲ್ ಕ್ಯಾನ್ಸರ್ ಜಾಗೃತಿ ಮಾತು ಮತ್ತು ಮಾಹಿತಿ ಕೈಪಿಡಿ ಬಿಡುಗಡೆ




ಮಣಿಪಾಲ: ಮಾರ್ಚ್ ತಿಂಗಳನ್ನು ಕೊಲೊರೆಕ್ಟಲ್ ಕ್ಯಾನ್ಸರ್ (ದೊಡ್ಡ ಕರುಳು ಮತ್ತು ಗುದನಾಳ ಸಂಬಂಧಿತ ) ಜಾಗೃತಿ ಮಾಸವನ್ನಾಗಿ ರಾಷ್ಟ್ರೀಯವಾಗಿ ಆಚರಿಸಲಾಗುತ್ತದೆ. ಈ ಪ್ರಯುಕ್ತ ಇಂದು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ಕೊಲೊರೆಕ್ಟಲ್ ಕ್ಯಾನ್ಸರ್ ಜಾಗೃತಿ ಜಾಗೃತಿ ಮಾತು ಮತ್ತು ಮಾಹಿತಿ ಕೈ ಪಿಡಿ ಹಾಗೂ ವಿಶೇಷ ರಿಯಾಯಿತಿ ದರದ ಪ್ಯಾಕೇಜ್ ಬಿಡುಗಡೆ ಮಾಡಲಾಯಿತು. ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಗ್ಯಾಸ್ಟ್ರೋ ಎಂಟೆರೊಲೊಜಿ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರು ಹಾಗೂ ಉಪವೈದ್ಯಕೀಯ ಅಧೀಕ್ಷಕರಾದ ಡಾ ಶಿರನ್ ಶೆಟ್ಟಿ ಅವರು " ಕೊಲೊರೆಕ್ಟಲ್ ಕ್ಯಾನ್ಸರ್, ಕೋಲನ್ (ದೊಡ್ಡ ಕರುಳು) ಅಥವಾ ಗುದನಾಳದಲ್ಲಿ ಸಂಭವಿಸುತ್ತದೆ, ಜೀವಕೋಶಗಳು ಅಸಹಜವಾದಾಗ ಮತ್ತು ನಿಯಂತ್ರಣವಿಲ್ಲದೆ ವಿಭಜಿಸಿ, ಗೆಡ್ಡೆ ಎಂದು ಕರೆಯಲ್ಪಡುವ ದ್ರವ್ಯರಾಶಿಯನ್ನು ರೂಪಿಸುತ್ತವೆ. ಭಾರತದಲ್ಲಿ, ಮಹಿಳೆಯರಿಗೆ ಹೋಲಿಸಿದರೆ ಪುರುಷರಲ್ಲಿ ಕರುಳಿನ ಕ್ಯಾನ್ಸರ್ ಮತ್ತು ಗುದನಾಳದ ಕ್ಯಾನ್ಸರ್ ನ ಪ್ರಮಾಣವು ಹೆಚ್ಚಾಗಿರುತ್ತದೆ.ಕೊಲೊರೆಕ್ಟಲ್ ಕ್ಯಾನ್ಸರ್ ಮರಣಕ್ಕೆ ಕಾರಣವಾಗಿರುವ ಕ್ಯಾನ್ಸರ್ ಗಳಲ್ಲಿ ಎರಡನೇ ಸ್ಥಾನದಲ್ಲಿದೆ, ಕೊಲೊರೆಕ್ಟಲ್ ಕ್ಯಾನ್ಸರ್ ಅನ್ನು ತಡೆಗಟ್ಟಬಹುದು, ಕೊಲೊನೋಸ್ಕೋಪಿ ಇದನ್ನು ಪತ್ತೆ ಹಚ್ಚಲು ಇರುವ ಸೂಕ್ತ ಪರೀಕ್ಷಾ ವಿಧಾನವಾಯಿದೆ. ಆದ್ದರಿಂದ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ ಈ ತಿಂಗಳ 31ದಿನಾಂಕದವರೆಗೆ ವಿಶೇಷ ರಿಯಾಯಿತಿಯಾಗಿ 4999 ರೂಪಾಯಿ ದರದಲ್ಲಿ ಕೊಲೊನೋಸ್ಕೋಪಿ ಮತ್ತು ಅವಶ್ಯಕ ರಕ್ತ ಪರೀಕ್ಷೆಯನ್ನು ನಡೆಸಲಾಗುತ್ತದೆ. ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು" ಎಂದು ಹೇಳಿದರು.

ವೈದ್ಯಕೀಯ ಅಧೀಕ್ಷಕರಾದ ಡಾ ಅವಿನಾಶ ಶೆಟ್ಟಿ, ಕಾರ್ಕಳ ಡಾ ಟಿ ಎಂ ಪೈ ಆಸ್ಪತ್ರೆ ವೈದ್ಯಾಧಿಕಾರಿ ಡಾ ಕೀರ್ತಿನಾಥ ಬಲ್ಲಾಳ, ಮಾರ್ಕೆಟಿಂಗ್ ಮುಖ್ಯಸ್ಥ ಸಚಿನ್ ಕಾರಂತ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.